All India Radio: Bangalore
Regional Bulletin In Kannada
13.04.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯ ಸರ್ಕಾರದ ಜಾತಿ ಗಣತಿ ವರದಿ ಬಗ್ಗೆ ಇದೇ ೧೭ರ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ - ಹೊಸದಾಗಿ ಸಮೀಕ್ಷೆ ನಡೆಸಲು ಬಿಜೆಪಿ ಆಗ್ರಹ
- ನಾಳೆ ಅಂಬೇಡ್ಕರ್ ಜಯಂತಿ; ಹುಬ್ಬಳ್ಳಿಗೆ ಆಗಮಿಸಿದ ಬಿಜೆಪಿಯ ಭೀಮ ಹೆಜ್ಜೆ ರಥಯಾತ್ರೆ
- ರಾಜ್ಯದ ಹಲವೆಡೆ ಇಂದು ಕೂಡ ಗುಡುಗು ಸಹಿತ ಭಾರೀ ಮಳೆ ಸಾಧ್ಯತೆ - ಹವಾಮಾನ ಇಲಾಖೆ ಮುನ್ಸೂಚನೆ
- ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ; ರಾಜಸ್ಥಾನ ರಾಯಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೯ ವಿಕೆಟ್‌ಗಳ ಗೆಲುವು

<><><><>

ಜಾತಿ ಗಣತಿ ವರದಿ ವಿಚಾರವಾಗಿ ಇದೇ ೧೭ ರಂದು ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿ ಗಣತಿಯಲ್ಲಿ ಲಿಂಗಾಯತರ ಸಂಖ್ಯೆ ಕಡಿಮೆಯಾಗಲು ಲಿಂಗಾಯತರೇ ಕಾರಣ ಎಂದು ತಿಳಿಸಿದ್ದಾರೆ. ಮೀಸಲಾತಿಗಾಗಿ ಹಿಂದೂ ರೆಡ್ಡಿ, ಹಿಂದೂ ಬಣಜಿಗ, ಹಿಂದೂ ಸಾದರ ಎಂದು ನಮೂದಿಸಿರುವ ಹಿನ್ನೆಲೆಯಲ್ಲಿ ಲಿಂಗಾಯತರ ಸಂಖ್ಯೆ ಕಡಿಮೆಯಾಗಿದೆ ಎಂದು ಪ್ರತಿಕ್ರಿಯಿಸಿದ್ದಾರೆ. ಎಲ್ಲರನ್ನು ಒಗ್ಗೂಡಿಸಿದರೆ, ಲಿಂಗಾಯತರ ಸಂಖ್ಯೆ ೧ ಕೋಟಿಗೂ ಅಧಿಕವಾಗಲಿದೆ ಎಂದು ತಿಳಿಸಿದ್ದಾರೆ. ಜಾತಿಗಣತಿ ವರದಿ ಜಾರಿಗೆ ತಂದರೆ ಬಿಜೆಪಿ ನಾಯಕರಿಗೆ ಏನು ಸಮಸ್ಯೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಬಳ್ಳಾರಿಯಲ್ಲಿ ಪ್ರಶ್ನಿಸಿದ್ದಾರೆ. ವರದಿ ಮೂಲಕ ಪ್ರತಿಯೊಂದು ಸಮುದಾಯದ ಆರ್ಥಿಕ, ಶೈಕ್ಷಣಿಕ ಪರಿಸ್ಥಿತಿ ಯಾವ ತರ ಇದೆ ಎಂಬ ಬಗ್ಗೆ ತಿಳಿದುಕೊಳ್ಳಬಹುದು ಎಂದು ತಿಳಿಸಿದ್ದಾರೆ.

<><><><>

ರಾಜ್ಯ ಸಚಿವ ಸಂಪುಟದಲ್ಲಿ ಮಂಡನೆಯಾಗಿರುವ ಸಾಮಾಜಿಕ , ಆರ್ಥಿಕ ಹಾಗೂ ಶೈಕ್ಷಣಿಕ ಗಣತಿಯ ಬಗ್ಗೆ ಪ್ರತಿಕ್ರಿಯೆ ನೀಡಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿರಾಕರಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಜಾತಿ ಗಣತಿಯ ವರದಿಯನ್ನು ಸಚಿವ ಸಂಪುಟದಲ್ಲಿ ಮಂಡಿಸಲಾಗಿದ್ದು, ಸಂಪುಟದ ಸಚಿವರು ಕೂಲಂಕಷ ಅಧ್ಯಯನ ಮಾಡುತ್ತಿದ್ದಾರೆ. ಇದೇ ೧೭ರಂದು ಮತ್ತೆ ಸಚಿವ ಸಂಪುಟದಲ್ಲಿ ಚರ್ಚಿಸಿ, ಬಳಿಕ ನಿರ್ಧಾರ ಕೈಗೊಳ್ಳಲಾಗುತ್ತದೆ. ಸಚಿವ ಸಂಪುಟದ ಅಂತಿಮ ನಿರ್ಧಾರದ ಬಳಿಕವಷ್ಟೇ ಪ್ರತಿಕ್ರಿಯಿಸುವುದಾಗಿ ಹೇಳಿದ್ದಾರೆ.

<><><><>

ಜಾತಿ ಗಣತಿ ವರದಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮುಳುವಾಗಬಹುದು ಎಂದು ಕೇಂದ್ರ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಜಾತಿ ಗಣತಿ ವರದಿಯಿಂದ ದೊಡ್ಡ ಗೊಂದಲ ಸೃಷ್ಟಿಯಾಗಲಿದೆ ಎಂದು ಹೇಳಿದ್ದಾರೆ. ಈ ಗಣತಿಯಲ್ಲಿ ವಿಶ್ವಾಸಾರ್ಹ ದತ್ತಾಂಶ ಸಂಗ್ರಹಿಸಲು ಸರಿಯಾಗಿ ಸಮೀಕ್ಷೆ ನಡೆಸಲಾಗಿಲ್ಲ. ಹಾಗೂ ವರದಿಯಲ್ಲಿ ಸಮಗ್ರತೆಯ ಕೊರತೆಯಿದೆ ಎಂದು ಅಭಿಪ್ರಾಯಪಟ್ಟಿದ್ದರೆ. ಪ್ರಸ್ತುತ ತಂದಿರುವ ಜಾತಿಗಣತಿ ವರದಿಯನ್ನು ಸಿದ್ದರಾಮಯ್ಯ ಅವರು ತಿರಸ್ಕರಿಸಬೇಕು. ಮತ್ತೊಂದು ಸಮೀಕ್ಷೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

<><><><>

ಜಾತಿ ಗಣತಿ ಬಗ್ಗೆ ಕಾಂಗ್ರೆಸ್ ನಾಯಕರಲ್ಲಿಯೇ ಗೊಂದಲವಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು ಜಾತಿಗಣತಿ ವರದಿ ವೈಜ್ಞಾನಿಕವಾಗಿಲ. ಈ ಹಿನ್ನೆಲೆಯಲ್ಲಿ ಮೊದಲು ವರದಿಯನ್ನು ವೈಜ್ಞಾನಿಕವಾಗಿ ಅಧ್ಯಯನ ಮಾಡಲಿ ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರಕ್ಕೆ ಸಮೀಕ್ಷೆ ಮಾಡುವ ಅಧಿಕಾರವಿದೆ. ಅದನ್ನು ಅಂತಿಮಗೊಳಿಸುವ ಅಧಿಕಾರ ಕೇಂದ್ರ ಸರ್ಕಾರದ್ದು ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಮತ ಬ್ಯಾಂಕ್ ಉಳಿಸಿಕೊಳ್ಳಲು ವರದಿ ಬಹಿರಂಗ ಮಾಡಿದೆ ಎಂದು ದೂರಿದ್ದಾರೆ.

<><><><>

ರಾಜ್ಯದ ಅತಿ ದೊಡ್ಡ ಸಮುದಾಯ ಮುಸ್ಲಿಂಮರು ಎಂಬುದನ್ನು ಬಿಂಬಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಯತ್ನಿಸುತ್ತಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ. ಸಾಮಾಜಿಕ ಜಾಲತಾಣದಲ್ಲಿ

ಪೋಸ್ಟ್ ಮಾಡಿರುವ ಬಿಜೆಪಿ ಇದು ಹವಾನಿಯಂತ್ರಿತ ಕಚೇರಿಯಲ್ಲಿ ಕುಳಿತು ತಯಾರಿಸಿರುವ ವರದಿ ಎಂದು ದೂರಿದೆ. ಮನೆ ಬಾಗಿಲಿಗೆ ತೆರಳಿ ತಯಾರಿಸಿದ ವರದಿ ಅಲ್ಲ ಎಂಬುದು ಅಂಕಿ-ಅಂಶಗಳಿಂದ ಸಾಬೀತಾಗುತ್ತಿದೆ ಎಂದು ಹೇಳಿದೆ.

<><><>

ಹಿಂದುಳಿದ ವರ್ಗಗಳ ಆಯೋಗವು ಸರ್ಕಾರಕ್ಕೆ ಸಲ್ಲಿಸಿದ ವಿವಾದಾತ್ಮಕ ಜಾತಿ ಗಣತಿ ವರದಿಯನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಜ್ಯಾಧ್ಯಕ್ಷ ಶಂಕರ್ ಬಿದರಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಲಿಂಗಾಯತ ಸಮುದಾಯದ ಜನಸಂಖ್ಯೆಯ ಬಗ್ಗೆ ನಿಖರ ಮಾಹಿತಿ ಇಲ್ಲ. ವರದಿಯಲ್ಲಿ ಕೇವಲ ೬೬ ಲಕ್ಷ ಎಂದು ತೋರಿಸಲಾಗಿದೆ ಎಂದು ದೂರಿದ್ದಾರೆ. ರಾಜ್ಯದಲ್ಲಿ ಹೊಸ ಜಾತಿ ಗಣತಿ ನಡೆಸಲಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಸಂವಿಧಾನ ಶಿಲ್ಪಿ ಡಾಕ್ಟರ್ ಬಿ.ಆರ್ ಅಂಬೇಡ್ಕರ್ ಅವರ ಜಯಂತಿ ಹಿನ್ನೆಲೆ ರಾಜ್ಯಾದ್ಯಂತ ಇಂದು ಮತ್ತು ನಾಳೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ನಿಪ್ಪಾಣಿಯವರೆಗೆ ಬಿಜೆಪಿ ಹಮ್ಮಿಕೊಂಡಿರುವ 'ಭೀಮ ಹೆಜ್ಜೆ' ರಥಯಾತ್ರೆ ಹುಬ್ಬಳ್ಳಿಗೆ ಇಂದು ಆಗಮಿಸಿತು. ಈ ವೇಳೆ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ಸಂಸದ ಮುನಿಸ್ವಾಮಿ ಸೇರಿದಂತೆ ಬಿಜೆಪಿಯ ಹಲವು ನಾಯಕರು ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಪ್ರಲ್ಹಾದ್ ಜೋಶಿ, ಡಾ. ಬಿ.ಆರ್. ಅಂಬೇಡ್ಕರ್ ಅವರು ನಿಪ್ಪಾಣಿಗೆ ೧೯೨೫ರ ಏಪ್ರಿಲ್ ೧೦ ಮತ್ತು ೧೧ರಂದು ಭೇಟಿ ನೀಡಿದ್ದರು. ಇದೀಗ ೧೦೦ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಕಾರ್ಯಕ್ರಮ ರೂಪಿಸಲು ಮೀನಾಮೇಷ ಎಣಿಸಿದೆ. ಹೀಗಾಗಿ ಬಿಜೆಪಿ ವತಿಯಿಂದ ಭೀಮ ಹೆಜ್ಜೆ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಸ್ಪಷ್ಟಪಡಿಸಿದರು. ಅಂಬೇಡ್ಕರ್ ಅವರಿಗೆ ಸಂಬಂಧಿಸಿದ ಐದು ಸ್ಥಳಗಳನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅಭಿವೃದ್ಧಿಪಡಿಸಿದೆ ಎಂದು ಹೇಳಿದರು. ಭೀಮ ಹೆಜ್ಜೆ ೧೦೦ರ ಶತಮಾನದ ಸಂಭ್ರಮ ಕಾರ್ಯಕ್ರಮದ ಅಂಗವಾಗಿ ಬಿಜೆಪಿ ಧಾರವಾಡ ಗ್ರಾಮೀಣ ಮಂಡಲದ

ವತಿಯಿಂದ ಆಯೋಜಿಸಿದ್ದ ಬೈಕ್ ರ್ಯಾಲಿ ಕಾರ್ಯಕ್ರಮಕ್ಕೆ ಧಾರವಾಡದ ಕೃಷಿ ವಿಶ್ವವಿದ್ಯಾಲಯದಿಂದ ಚಾಲನೆ ನೀಡಲಾಯಿತು.

<><><>

ಪ್ರತಿಯೊಬ್ಬರೂ ಸಂವಿಧಾನದ ಬಗ್ಗೆ ಅರಿವು ಹೆಚ್ಚಿಸಿಕೊಳ್ಳುವುದು ಅಗತ್ಯವಿದೆ ಎಂದು ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಡಾಕ್ಟರ್ ಎಚ್.ಎನ್. ನಾಗಮೋಹನದಾಸ್ ತಿಳಿಸಿದ್ದಾರೆ. ಬೆಳಗಾವಿಯ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಆಯೋಜಿಸಲಾದ ರಾಜ್ಯಮಟ್ಟದ ಸಂವಿಧಾನ ಓದು ಅಧ್ಯಯನ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಕರು ಸಂವಿಧಾನ ಅರಿವು ವಿಸ್ತರಿಸಿ ವಿದ್ಯಾರ್ಥಿಗಳಿಗೆ ಸಂವಿಧಾನದ ಮಹತ್ವ ಕುರಿತು ಅರಿವು ಮೂಡಿಸಿದರೆ ನಾಳಿನ ಭಾರತವನ್ನು ಇನ್ನಷ್ಟು ಸಮರ್ಥವಾಗಿ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ನಾಗಮೋಹನದಾಸ್ (೩೦ ಸೆಕೆಂಡ್‌ಗಳು)

<><><>

ಸೇವಾದಳ ಕಾಂಗ್ರೆಸ್ ಪಕ್ಷದ ಆಧಾರಸ್ತಂಭ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ಭಾರತ್ ಜೋಡೋ ಭವನದಲ್ಲಿ ಇಂದು ನಡೆದ ಭಾರತೀಯ ಸೇವಾದಳದ ರಾಜ್ಯ ಮಟ್ಟದ ಸಮ್ಮೇಳನದಲ್ಲಿ ಮಾತನಾಡಿದ ಅವರು, ದೇಶದ ಭದ್ರತೆ ಉದ್ದೇಶದಿಂದ ಸ್ಥಾಪನೆಯಾದ ವಿಭಾಗ ಸೇವಾದಳ. ನೆಹರೂ ಅವರ ಅವಧಿಯಲ್ಲಿ ಪ್ರಾರಂಭವಾಗಿ ಈಗ ಮಲ್ಲಿಕಾರ್ಜುನ ಖರ್ಗೆ ಅವರ ಅವಧಿವರೆಗೆ ನಡೆದುಕೊಂಡು ಬಂದಿದೆ. ಸೇವಾದಳ ಕಾಂಗ್ರೆಸ್ ಪಕ್ಷದ ಕಡೆಯ ಅಂಗ ಎಂದು ಹೇಳಿದ್ದಾರೆ.

<><><>

ಕರಾವಳಿಯ ಚರ್ಚ್‌ಗಳಲ್ಲಿಂದು ಶ್ರದ್ಧಾ ಭಕ್ತಿಯಿಂದ ಗರಿಗಳ ಭಾನುವಾರ -ಪಾಮ್ ಸಂಡೇ ಆಚರಿಸಲಾಯಿತು. ಯೇಸು ಕ್ರಿಸ್ತರು ಶಿಲುಬೆಗೆ ಏರುವ ಒಂದು ವಾರದ ಮೊದಲು ಅಂದಿನ ಜೆರೋಸಲೆಂ ಪಟ್ಟಣವನ್ನು ಪ್ರವೇಶಿಸುವಾಗ ಯಹೂದಿ ಸಮುದಾಯದವರು ಅಲಿವ್ ಮರದ ಗರಿಗಳಿಂದ ಸಿಂಗರಿಸಿ, ಬರಮಾಡಿಕೊಂಡರು ಎನ್ನುವ ನಂಬಿಕೆ ಇದೆ. ಈ ಹಿನ್ನೆಲೆಯಲ್ಲಿ ಕ್ರೈಸ್ತ ಬಾಂಧವರು ಕಪ್ಪು ತಿಂಗಳ ಕೊನೆ ವಾರದಲ್ಲಿ ಪವಿತ್ರವಾರದ ಆರಂಭದ ದಿನದಂದು ಗರಿಗಳ ಭಾನುವಾರ ಎಂದು ಆಚರಿಸುತ್ತಾರೆ. ಮಂಗಳೂರಿನ ರೊಸಾರಿಯೋ ಚರ್ಚ್, ಮಿಲಾಗ್ರಿಸ್ ಚರ್ಚ್,

ಲೇಡಿಹಿಲ್ ಚರ್ಚ್, ಚರ್ಚ್ ಸೇರಿದಂತೆ ಮಂಗಳೂರು, ಉಡುಪಿ ಧರ್ಮಪ್ರಾಂತ್ಯದ ಎಲ್ಲ ಚರ್ಚ್‌ಗಳಲ್ಲಿ ಗರಿಗಳ ಹಬ್ಬ ಆಚರಿಸಲಾಯಿತು. ಈ ಮೂಲಕ ಕ್ರೈಸ್ತರು ಗುಡ್‌ಫ್ರೈಡೆ ಹಾಗೂ ಈಸ್ಟರ್ ಹಬ್ಬಕ್ಕೆ ಪೂರ್ವ ಸಿದ್ಧತೆ ಮಾಡಿಕೊಂಡರು.

<><><><>

ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಹಾಗೂ ಬೆಂಗಳೂರಿನ ಹಲವೆಡೆ ಮಳೆಯಾಗಿದೆ. ಬೆಂಗಳೂರು, ಶಿವಮೊಗ್ಗ, ಕರಾವಳಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಇಂದು ಕೂಡ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಸಿ ಎಸ್ ಪಾಟೀಲ್ ತಿಳಿಸಿದ್ದಾರೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು, ವಿಜಯಪುರದಲ್ಲಿ ಇಂದು ಗುಡುಗು ಸಹಿತ ಮಳೆಯಾಗಲಿದೆ ಎಂದು ಅವರು ಹೇಳಿದ್ದಾರೆ.

ಧ್ವನಿ : ಸಿ.ಎಸ್. ಪಾಟೀಲ್

<><><><>

ರಾಜಸ್ಥಾನದ ಜೈಪುರ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ರಾಜಸ್ಥಾನ ರಾಯಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ಗೆಲುವು ಸಾಧಿಸಿದೆ. ೧೭೪ ರನ್‌ಗಳ ಗುರಿ ನೀಡಿದೆ. ನಿಗದಿತ ೨೦ ಓವರ್‌ಗಳಲ್ಲಿ ರಾಜಸ್ಥಾನ ರಾಯಲ್ಸ್ ತಂಡ ೪ ವಿಕೆಟ್ ನಷ್ಟಕ್ಕೆ ೧೭೩ ರನ್ ಗಳಿಸಿತು. ಈ ಗುರಿ ಬೆನ್ನಟ್ಟಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ೧ ವಿಕೆಟ್ ನಷ್ಟಕ್ಕೆ ೧೭೫ ರನ್ ಗಳಿಸಿದೆ. ಗೊ ಗ್ರೀನ್ ಅಭಿಯಾನದ ಭಾಗವಾಗಿ ಆರ್‌ಸಿಬಿ ಹಸಿರು ಜೆರ್ಸಿಯೊಂದಿಗೆ ಕಣಕ್ಕಿಳಿದಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

- ಯುವ ಸಮೂಹ ಹಾದಿ ತಪ್ಪುವುದನ್ನು ತಪ್ಪಿಸಲು ಹಾಗೂ ಆರೋಗ್ಯಕರ ಜೀವನ ನಡೆಸಲು ಕ್ರೀಡೆ ಸಹಕಾರಿಯಾಗಿದೆ ಎಂದು ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ ಅಭಿಪ್ರಾಯಪಟ್ಟಿದ್ದಾರೆ

- ಚಿಕ್ಕಬಳ್ಳಾಪುರ ತಾಲ್ಲೂಕಿನ ಗುಂಡ್ಲಮಂಡಿಕಲ್ಲು ಗ್ರಾಮದಲ್ಲಿ ೪೦ ಲಕ್ಷ ರೂಪಾಯಿಗಳ ಅಂದಾಜು ಮೊತ್ತದ ೩೮ ಶೌಚಾಲಯಗಳ ನಿರ್ಮಾಣ ಕಾಮಗಾರಿಗೆ ಶಾಸಕ ಪ್ರದೀಪ್ ಈಶ್ವರ್ ನಾಳೆ ಭೂಮಿ ಪೂಜೆ ನೆರವೇರಿಸಲಿದ್ದಾರೆ.
- ಬೆಂಗಳೂರು ದಲಿತ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿರುವ ಬೆಂಗಳೂರು ನಗರ ಜಿಲ್ಲಾ ದಲಿತ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಕೋಲಾರದ ಹಿರಿಯ ಸಾಹಿತಿ ಕೋಟಿಗಾನಹಳ್ಳಿ ರಾಮಯ್ಯ ಆಯ್ಕೆಯಾಗಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>